ಶ್ರೀ ಹೆಚ್. ಡಿ. ರೇವಣ್ಣ: ಮಾನ್ಯ ಅಧ್ಯಕ್ಷರೆ, ಅಲ್ಲಿ ಹೆರಿಗೆ ಮತ್ತು ಮಕ್ಕಳ ಆಸ್ಪತ್ರೆ ಬಗ್ಗೆ ನಬಾರ್ಡನ ಅನುದಾನವನ್ನು ತೆಗೆದುಕೊಂಡು ಮಾಡ ಬೇಕೆಂದು ಇತ್ತು. ಅದರ ಬಗ್ಗೆ ಏನಾಗಿದೆ ಎಂದು ಕೇಳುತ್ತಿದ್ದೇನೆ.

ಶ್ರೀ ಟಿ. ಬಿ. ಜಯಚಂದ್ರ: ಮಾನ್ಯ ರೇವಣ್ಣನವರೆ, ಅದಕ್ಕೆ ಸ್ಪಷ್ಟ ಉತ್ತರವನ್ನು ಕೊಟ್ಟಿದೆ.

ಶ್ರೀ ಹೆಚ್. ಡಿ. ರೇವಣ್ಣ: ಅದನ್ನು ಬೇಗ ಮಾಡಿಸಿಕೊಡಿ ಎಂದು ಕೇಳುತ್ತಿದ್ದೇನೆ.

ಶ್ರೀ ಟಿ. ಬಿ. ಜಯಚಂದ್ರ: ಇದು ಕ್ಯಾಬಿನೆಟ್‌ನಲ್ಲಿ ಅನುಮೋದನೆಗೆ ಬರಬೇಕೆಂದು ಹೇಳಿದ್ದಾರೆ. ಆದಷ್ಟು ಬೇಗ ಕ್ಯಾಬಿನೆಟ್‌ಗೆ ಕಳುಹಿಸಿಕೊಡುತ್ತೇನೆ.

v) ವಿಷಯ: ಬಿಜಾಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಅಲಮೇಲ ಗ್ರಾಮವು ಈಗಾಗಲೇ ಹೋಬಳಿ ಕೇಂದ್ರವಾಗಿದ್ದು, ಪಿ.ಎಸ್.ಐ. ಮಟ್ಟದ ಪೊಲೀಸ್ ಠಾಣೆ, ಹಲವಾರು ಶಿಕ್ಷಣ ಸಂಸ್ಥೆಗಳು, ಪದವಿ ಕಾಲೇಜು ಹಾಗೂ ವಾಣಿಜ್ಯ ಬ್ಯಾಂಕ್‌ಗಳನ್ನು ಹೊಂದಿದ್ದು, ಅಲಮೇಲ ಹೋಬಳಿಯನ್ನು ಹೊಸ ತಾಲ್ಲೂಕನ್ನಾಗಿ ಘೋಷಣೆ ಮಾಡುವ ಬಗ್ಗೆ.

ಶ್ರೀ ಭೂಸನೂರ ರಮೇಶ್ ಬಾಳಪ್ಪ (ಸಿಂಧಗಿ): ಮಾನ್ಯ ಅಧ್ಯಕ್ಷರೆ, ಬಿಜಾಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಅಲಮೇಲ ಗ್ರಾಮವು ಈಗಾಗಲೇ ಹೋಬಳಿ ಕೇಂದ್ರವಾಗಿದ್ದು, ಪಿ.ಎಸ್.ಐ. ಮಟ್ಟದ ಪೊಲೀಸ್ ಠಾಣೆ, ಹಲ ವಾರು ಶಿಕ್ಷಣ ಸಂಸ್ಥೆಗಳು, ಪದವಿ ಕಾಲೇಜು ಹಾಗೂ ವಾಣಿಜ್ಯ ಬ್ಯಾಂಕ್ ಗಳನ್ನು ಹೊಂದಿದ್ದು, ಅಲಮೇಲ ಹೋಬಳಿಯನ್ನು ಹೊಸ ತಾಲ್ಲೂಕನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಹೆಚ್. ಎಸ್. ಮಹದೇವಪ್ರಸಾದ್, ಸಹಕಾರ ಸಚಿವರು (ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ತಮ್ಮ ಅಪ್ಪಣೆಯನ್ನು ಪಡೆದು ಈ ಹೇಳಿಕೆಯನ್ನು ನೀಡಬಯಸುತ್ತೇನೆ.

ಶ್ರೀ ಹೆಚ್. ಎಸ್. ಮಹದೇವಪ್ರಸಾದ್, ಸಹಕಾರ ಸಚಿವರು (ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2013–14ನೇ ಸಾಲಿನ ಫೆಬ್ರವರಿ ಮಾಹೆಯ ಆಯವ್ಯಯದಲ್ಲಿ 43 ತಾಲ್ಲೂಕುಗಳನ್ನು ಹೊಸದಾಗಿ ರಚಿಸಲಾಗು ವುದೆಂದು ಘೋಷಣೆ ಮಾಡಲಾಗಿರುತ್ತದೆ ಹಾಗೂ ಈ ಹೊಸ ತಾಲ್ಲೂಕುಗಳ ಪೈಕಿ ಬಿಜಾಪುರ ಜಿಲ್ಲೆಯ ಅಲಮೇಲವು ಸೇರಿರುವುದಿಲ್ಲ ಮತ್ತು ಇದೇ ಸಾಲಿನ ಜುಲೈ ಮಾಹೆಯ ಆಯವ್ಯಯದಲ್ಲಿ ಎಲ್ಲಾ ದೃಷ್ಟಿಕೋನಗಳಿಂದ ಪರಾ ಮರ್ಶಿಸಿ ಹಂತಹಂತವಾಗಿ ಹೊಸ ತಾಲ್ಲೂಕುಗಳನ್ನು ರಚಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಘೋಷಿಸಲಾಗಿರುತ್ತದೆ.

ಮುಂದುವರೆದು, 2014–15ನೇ ಸಾಲಿನ ಆಯವ್ಯಯದಲ್ಲಿ ಹೊಸ ತಾಲ್ಲೂಕುಗಳ ರಚನೆಗೆ ಸಂಬಂಧಿಸಿದಂತೆ ಯಾವುದೇ ಘೋಷಣೆ ಮಾಡಲಾಗಿ ರುವುದಿಲ್ಲ.

ಮುಂದಿನ ದಿನಗಳಲ್ಲಿ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಗಮನ ದಲ್ಲಿಟ್ಟುಕೊಂಡು ಹೊಸ ತಾಲ್ಲೂಕುಗಳ ರಚನೆಗೆ ಸಂಬಂಧಿಸಿದಂತೆ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು.

ಅಧ್ಯಕ್ಷರು: ಉತ್ತರ ಹೇಳಿದ್ದಾರಲ್ಲ.

ಶ್ರೀ ಹೆಚ್. ಎಸ್. ಮಹದೇವ ಪ್ರಸಾದ್: ಮಾನ್ಯ ಅಧ್ಯಕ್ಷರೆ, 43 ತಾಲ್ಲೂಕುಗಳನ್ನು ಹೊಸದಾಗಿ ರಚನೆ ಮಾಡುವುದಕ್ಕೆ ಘೋಷಣೆ ಮಾಡಿದ್ದಾರೆ, ಅದರಲ್ಲಿ ಈ ಗ್ರಾಮ ಸೇರಿಲ್ಲ. 43 ತಾಲ್ಲೂಕುಗಳನ್ನು ಮಾಡಿದ ನಂತರ ಸರ್ಕಾರದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಇದರ ಬಗ್ಗೆ ಪರಿಶೀಲನೆ ಮಾಡುತ್ತೇವೆ.

ಶ್ರೀ ಭೂಸನೂರು ರಮೇಶ್ ಬಾಳಪ್ಪ: ಮಾನ್ಯ ಅಧ್ಯಕ್ಷರೆ, ಎಂ. ವಾಸುದೇವ ಸಮಿತಿ ಶಿಫಾರಸ್ಸು ಮಾಡಿದ್ದಾರೆ.

ಅಧ್ಯಕ್ಷರು: ಈಗ ಎಸ್. ಆರ್. ವಿಶ್ವನಾಥ ಕೇಳಿ, ಅವರು ಇಲ್ಲ.